# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 933 |
| 2 | ಸದಸ್ಯರ ಹೆಸರು | : | ಶ್ರೀ ದಿನೇಶ್ ಗೂಳಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3 | ಉತ್ತರಿಸುವ ದಿನಾಂಕ | : | 24-02-2022 |
| 4 | ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಕಾನೂನು ಬಲವರ್ಧನೆಗೆ ಪಿ.ಇ.ಬಿ, (ಪೋಲೀಸ್ ಎಷ್ಟಾಬ್ಲಿಷ್‌ಮೆಂಟ್ ಬೋರ್ಡು) ಮೂಲಕ ಪೋಲೀಸ್ ನಿರೀಕ್ಷಕರುಗಳ ಹಾಗೂ ಅಧಿಕಾರಿಗಳ ವರ್ಗಾವಣೆಗಳನ್ನು 2 ವರ್ಷಕ್ಕೆ ನಿಗಧಿಪಡಿಸಿದ್ದು; ಆದರೆ ಒಂದು ವರ್ಷ ಪೂರೈಸಿದ ಅಧಿಕಾರಿಗಳನ್ನು ಕೂಡಲೇ ವರ್ಗಾವಣೆ ಮಾಡಲಾಗುತ್ತಿದ್ದು, ಇದರಿಂದ ಕಾನೂನು ಸುವ್ಯವಸ್ಥೆಯ ಮೇಲೆ ಪರಿಣಾಮ ಉಂಟಾಗುವುದಿಲ್ಲವೆ; | ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ 60 ಪೊಸಇ 2009, ದಿನಾಂಕ:24.08.2009 ರಂತೆ ಪೊಲೀಸ್ ಠಾಣೆಯ ಪ್ರಭಾರ ಹೊಂದಿರುವ ಠಾಣಾಧಿಕಾರಿ, ಪೊಲೀಸ್ ವೃತ್ತದ ಪ್ರಭಾರ ಹೊಂದಿರುವ ಸರ್ಕಲ್ ಇನ್ಸ್‌ಪೆಕ್ಟರ್ ಮತ್ತು ಉಪ ವಿಭಾಗದ ಪ್ರಭಾರವನ್ನು ಹೊಂದಿರುವ ಪೊಲೀಸ್ ಉಪ ವಿಭಾಗಾಧಿಕಾರಿಗಳು ಕನಿಷ್ಠ 02 ವರ್ಷಗಳ ಪದಾವಧಿ ಹೊಂದಿರತಕ್ಕದ್ದು.<br>ತದನಂತರ ಕರ್ನಾಟಕ ಪೊಲೀಸ್ (ತಿದ್ದುಪಡಿ) ಕಾಯ್ದೆ 2013, ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 74 ಸಸನ 2012, ದಿನಾಂಕ:18.06.2013 ರಲ್ಲಿ ಇದನ್ನು ಒಂದು ವರ್ಷದ ಅವಧಿ ಎಂದು ತಿದ್ದುಪಡಿಯನ್ನು ತರಲಾಗಿರುತ್ತದೆ.<br>ಇದರಿಂದಾಗಿ ಕಾನೂನು ಸುವ್ಯವಸ್ಥೆಗೆ ಯಾವುದೇ ಪರಿಣಾಮ ಉಂಟಾಗುವುದಿಲ್ಲ. |
| ಆ | ಪೊಲೀಸ್ ಅಧಿಕಾರಿಗಳ ವರ್ಗಾವಣೆಯನ್ನು ಕನಿಷ್ಠ 2 ವರ್ಷಕ್ಕೆ ನಿಗಧಿಪಡಿಸಲು ಸರ್ಕಾರ ಚಿಂತಿಸಿದೆಯೇ? | ಇಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |

ಸಂಖ್ಯೆ: ಒಇ 31 ಪಿಇಎಂ 2022

(ಆರಗ ಜ್ಞಾನೇಂದ್ರ)
ಗೃಹ ಸಚಿವರು